# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದಲ್ಲಿ "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011"ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕಾರ್ಯಾಗಾರ/ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಲುವಾಗಿ ಮೈಸೂರಿನ ಆಡಳಿತ ತರಬೇತಿ ಸಂಸ್ಥೆಗೆ ರೂ.50.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ: ಸಿಆಸುಇ 20 ಇಕಾಅ 2012, ದಿನಾಂಕ: 13.03.2013
2. ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ATI/TRG/F(PA-2)/Sakal-3/2012-13, ದಿನಾಂಕ:16/03/2013.

ಪ್ರಸ್ತಾವನೆ :

ಮೇಲೆ ಓದಲಾದ (1) ರ. ಅರೆ ಸರ್ಕಾರಿ ಪತ್ರದಲ್ಲಿ ಸಕ್ಷಮ ಅಧಿಕಾರಿಗಳಿಗೆ ಮೇಲ್ಮನವಿ ಪ್ರಾಧಿಕಾರಗಳಿಗೆ ತರಬೇತಿಯನ್ನು ನೀಡುವ ಅಗತ್ಯತೆಯನ್ನು ಮನಗೊಂಡು ಸದರಿ ಅಧಿಕಾರಿಗಳಿಗೆ ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರ ವತಿಯಿಂದ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಕೋರಲಾಗಿದೆ.

ಮೇಲೆ ಓದಲಾದ (2) ರ ಅರೆ ಸರ್ಕಾರಿ ಪತ್ರದಲ್ಲಿ ಸಕಾಲ ಯೋಜನೆಯ 3ನೇ ಹಂತದ ತರಬೇತಿ ಕಾರ್ಯಕ್ರಮಕ್ಕಾಗಿ ರೂ.1.00 ಕೋಟಿ ರೂ.ಗಳ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ, ಪ್ರಸ್ತಾವನೆಯನ್ನು ಅನುಮೋದಿಸುತ್ತಾ, 3ನೇ ಹಂತದ ತರಬೇತಿಯ ಮೊದಲನೇ ಕಂತಾಗಿ, ರೂ.50.00 ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 20 ಇಕಾಅ 2012, ಬೆಂಗಳೂರು, ದಿನಾಂಕ: 09ನೇ ಏಪ್ರಿಲ್ 2013.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011" ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ, ಸಕಾಲ ಯೋಜನೆಯ 3ನೇ ಹಂತದ ಕಾರ್ಯಾಗಾರ/ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಸಲುವಾಗಿ ಆಡಳಿತ ತರಬೇತಿ ಸಂಸ್ಥೆ, ಮೈಸೂರು ಇವರಿಗೆ ಮೊದಲ ಕಂತಾಗಿ ರೂ.50.00 ಲಕ್ಷ (ಐವತ್ತು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ಮೇಲಿನ ವೆಚ್ಚವನ್ನು 2013-14ನೇ ಸಾಲಿಗೆ ಲೆಕ್ಕಶೀರ್ಷಿಕೆ "2052-00-090-0-26-051" (ಯೋಜನೇತರ) "ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011" ರ ಅನುಷ್ಠಾನದಡಿ ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 04 ಟಿಎಫ್‌ಪಿ 2012, ದಿನಾಂಕ: 27.04.2012ರಲ್ಲಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Ghayathri 9/4/13
(ಸಿ.ಎ. ಗಾಯತ್ರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)
(ನಾಗರೀಕ ಸೇವೆಗಳು ಮತ್ತು ರಾಜಕೀಯ ವಿಶ್ರಾಂತಿ ವೇತನ-2)

<u>ಇವರಿಗೆ :</u>

1. ಕರ್ನಾಟಕ ಮಹಾಲೇಖಪಾಲರು, (ಲೆಕ್ಕಪತ್ರ)/(ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಹಾ ನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು-5700011.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಟಿ ಅಂಡ್ ಆರ್), ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಹಾಗೂ ಮಿಷನ್ ನಿರ್ದೇಶಕರು, ಸಕಾಲ ಮಂಡಳ, ಬಹುಮಹಡಿ ಕಟ್ಟಡ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
9. ಅಪರ ಮಿಷನ್ ನಿರ್ದೇಶಕರು, ಸಕಾಲ ಮಂಡಳ, ಸಿಆಸುಇ (ಆಸು) ವಿಶ್ವೇಶ್ವರಯ್ಯ ದೊಡ್ಡ ಗೋಪುರ, 20ನೇ ಮಹಡಿ, ಬೆಂಗಳೂರು.
10. ಆಡಳಿತಾಧಿಕಾರಿ, ಸಕಾಲ ಮಂಡಳಿ, ಸಿಆಸುಇ (ಆಸು), ಬೆಂಗಳೂರು.
11. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು
12. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.